**ಜಿಲ್ಲಾಧಿಕಾರಿಗಳ ಕಾರ್ಯಾಲಯ**
**(ಜಿಲ್ಲಾ ನಗರಾಭಿವೃದ್ಧಿ ಕೋಶ ಕಲಬುರಗಿ)**

ಸಂ:ಜಿನಕೋ/ಸಿಬ್ಬಂದಿ-2/09/2025-26 ದಿನಾಂಕ: 18 :03.2026.

**-:ಅಧಿಸೂಚನೆ:-**

ವಿಷಯ:- ರಾಜ್ಯದ ಮಹಾನಗರ ಪಾಲಿಕೆ ಹಾಗೂ ನಗರಸಭೆಗಳಲ್ಲಿ ನೇರ ಪಾವತಿಯಡಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ವಿಧಾನದ ಸಂಬಂಧ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿರುವ ಕುರಿತು.

ಉಲ್ಲೇಖ:-
1. ಮಾನ್ಯ ಸರ್ಕಾರದ ಅಧೀನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಬೆಂಗಳೂರು ರವರ ಅಧಿಸೂಚನೆ ಇ-ಸಂ: ನಅಇ 108 ಜಿಇಎಲ್ 2021 (ಇ) ದಿನಾಂಕ:07.08.2025.
2. ಮಾನ್ಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ರವರ ಸುತ್ತೋಲೆ ಸಂಖ್ಯೆ:513641/ಡಿಎಂಎ/ಇಎಸ್‌ಟಿ-2/Oth/8/2021 ದಿನಾಂಕ:18.11.2025.
3. ಪೌರಾಯುಕ್ತರು, ನಗರಸಭೆ ಶಹಬಾದ ರವರ ಪ್ರಸ್ತಾವನೆ ಸಂ:ನಸಶ/ಸಿಬ್ಬಂದಿ/2025-26 ದಿ:22.12.2025

---*---

ಕಲಬುರಗಿ ಜಿಲ್ಲೆಯ ನಗರಸಭೆ ಶಹಬಾದನಲ್ಲಿ ನೇರಪಾವತಿಯಡಿ ಖಾಲಿ ಇರುವ "ಪೌರಕಾರ್ಮಿಕರ" ಹುದ್ದೆಗಳಿಗೆ ಉಲ್ಲೇಖ(01) ರಿಂದ(02)ರಂತೆ ನೀಡಿರುವ ನಿರ್ದೇಶನಗಳನ್ವಯ ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಿದ್ದು, ಅರ್ಜಿಸಲ್ಲಿಸುವ ಅಭ್ಯರ್ಥಿಗಳು ನಗರಸಭೆ ಶಹಬಾದನಲ್ಲಿ ಪೌರಕಾರ್ಮಿಕರಾಗಿ ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಪೌರಕಾರ್ಮಿಕರಾಗಿ, ಲೋಡರ್ಸ್/ ಯುಜಿಡಿ ಹೆಲ್ಪರ್ಸ್, ತ್ಯಾಜ್ಯ ಸಂಸ್ಕರಣ ಘಟಕ, ಸಾರ್ವಜನಿಕ ಶೌಚಾಲಯ, ಶೂನ್ಯ ತ್ಯಾಜ್ಯ ನಿರ್ವಹಣೆ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ/ಕಾರ್ಯನಿರ್ವಹಿಸಿದ ಅಭ್ಯರ್ಥಿಗಳಾಗಿರಬೇಕು. ಇಚ್ಛೆಯುಳ್ಳ ಅಭ್ಯರ್ಥಿಗಳು ಅರ್ಜಿಯ ಎಲ್ಲಾ ಅಂಕಣಗಳನ್ನು ಭರ್ತಿ ಮಾಡಿ ಅರ್ಜಿಯ ಜೊತೆಗೆ ಕಾರ್ಯನಿರ್ವಹಿಸುತ್ತಿರುವುದಕ್ಕೆ ಆದೇಶ ಪ್ರತಿ /ಇ.ಎಸ್.ಐ ಮತ್ತು ಪಿ.ಎಫ್ ಕಟಾವಣೆ ದಾಖಲೆ, ಜನ್ಮದಿನಾಂಕಕ್ಕೆ ವಿದ್ಯಾಭ್ಯಾಸದ ಅಥವಾ ಆಧಾರ ಕಾರ್ಡ್, ಮತದಾರರ ಗುರುತಿನ ಚೀಟಿಯ ಸೂಕ್ತ ದಾಖಲೆಗಳೊಂದಿಗೆ (ಪೌರಾಯುಕ್ತರಿಂದ ದೃಢೀಕರಿಸಿದ ಪ್ರತಿಗಳೊಂದಿಗೆ) ಅರ್ಜಿಯನ್ನು ಮಾನ್ಯ ಜಿಲ್ಲಾಧಿಕಾರಿಗಳು ಕಲಬುರಗಿ ಹಾಗೂ ಪೌರಕಾರ್ಮಿಕರ ನೇರಪಾವತಿ ನೇಮಕಾತಿ ಪ್ರಾಧಿಕಾರಿ ಕಲಬುರಗಿ ಇವರ ಪರವಾಗಿ ಪೌರಾಯುಕ್ತರು ನಗರಸಭೆ ಶಹಬಾದ ಇವರಿಗೆ ನಿಗಧಿತ ಅವಧಿಯೊಳಗೆ ಸಲ್ಲಿಸತಕ್ಕದ್ದು.

ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ:01/04/26 ಸಾಯಂಕಾಲ 05.30 ಗಂಟೆಯವರೆಗೆ ಆಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪೌರಾಯುಕ್ತರು ನಗರಸಭೆ ಶಹಬಾದ ಇವರನ್ನು ಅಥವಾ Shahabadcmc.mrc.gov.in ಜಾಲತಾಣಕ್ಕೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

**ನಗರಸಭೆ ಶಹಬಾದ**

01 ನೇರಪಾವತಿ ನೇಮಕಾತಿಗೆ ಲಭ್ಯವಿರುವ ಪೌರಕಾರ್ಮಿಕರ ಹುದ್ದೆಗಳ ಸಂಖ್ಯೆ:

| ನಗರಸ್ಥಳೀಯ ಸಂಸ್ಥೆಯ ಹೆಸರು | ಒಟ್ಟು ಹುದ್ದೆಗಳು |
|---|---|
| ನಗರಸಭೆ ಶಹಬಾದ | 42 |

| ಹುದ್ದೆಯ ವಿವರ ಹಾಗೂ ವೇತನ ಶ್ರೇಣಿ | ಭರ್ತಿ ಮಾಡಬೇಕಾದ ನಗರಸಭೆ/ಪುರಸಭೆ ಹುದ್ದೆಗಳ ಸಂಖ್ಯೆ | ಕನಿಷ್ಠ ವಿದ್ಯಾರ್ಹತೆ/ಅರ್ಹತೆಗಳು |
|---|---|---|
| ಹುದ್ದೆ: ಪೌರಕಾರ್ಮಿಕ<br>ವೇತನ : ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯನ್ವಯ ವೇತನ ನಿಗದಿಪಡಿಸುವದು ಹಾಗೂ ಕಾರ್ಮಿಕ ಇಲಾಖೆಯ ಕಾಲಕಾಲಕ್ಕೆ ಪರಿಷ್ಕರಿಸುವ ವೇತನವವನ್ನು ಮತ್ತು ಪಿ.ಎಫ.ಹಾಗೂ ಇ.ಎಸ್.ಐ ಸೌಲಭ್ಯವನ್ನು ಕಲ್ಪಿಸುವುದು. | ಶಹಬಾದ ನಗರಸಭೆ ಹುದ್ದೆಗಳ ಸಂಖ್ಯೆ<br>42 | 1) ವಿದ್ಯಾರ್ಹತೆ ಅನ್ವಯಿಸುವುದಿಲ್ಲ.<br>2) ಕನ್ನಡ ಮಾತನಾಡಲು.<br>3)ಅರ್ಜಿಸಲ್ಲಿಸುವ ಅಭ್ಯರ್ಥಿಗಳು ನಗರಸಭೆ ಶಹಬಾದನಲ್ಲಿ ಪೌರಕಾರ್ಮಿಕರಾಗಿ ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಪೌರಕಾರ್ಮಿಕರಾಗಿ, ಲೋಡರ್ಸ್/ ಯುಜಿಡಿ ಹೆಲ್ಪರ್ಸ್, ತ್ಯಾಜ್ಯ ಸಂಸ್ಕರಣ ಘಟಕ, ಸಾರ್ವಜನಿಕ ಶೌಚಾಲಯ, ಶೂನ್ಯ ತ್ಯಾಜ್ಯ ನಿರ್ವಹಣೆ ಘಟಕದಲ್ಲಿ ಕಾರ್ಯನಿರ್ವಹಿಸಿ |

Scanned with OKEN Scanner

| | | |
|---|---|---|
| | | ಕಾರ್ಯನಿರ್ವಹಿಸುತ್ತಿರುವ/ಕಾರ್ಯನಿರ್ವಹಿಸಿದ ಅಭ್ಯರ್ಥಿಗಳಾಗಿರಬೇಕು. ಪೌರಕಾರ್ಮಿಕರಾಗಿ ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುವಾಗ ಕೋವಿಡ–19 ರ ಸಾಂಕ್ರಾಮಿಕ ರೋಗಕ್ಕೆ ತುತ್ತಾಗಿ ಅಥವಾ ಇತರೆ ಕಾರಣಗಳಿಂದಾಗಿ ಮರಣ ಹೊಂದಿರುವ ಕುಟುಂಬದ ಸದಸ್ಯರಾಗಿರಬೇಕು. ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಅಧಿನಿಯಮದಡಿ ಗುರುತಿಸಲ್ಪಟ್ಟ ಸಂತ್ರಸ್ಥರುಗಳು ಅಥವಾ ಅವರ ಕುಟುಂಬದ ಸದಸ್ಯರು (ಗಂಡ, ಹೆಂಡತಿ, ಮಗ/ ಮಗಳು). |

01) ನೇಮಕಾತಿ ವಿಧಾನ: ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಪುರಸಭೆಗಳ (ರಾಜ್ಯದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿನ ಪೌರಕಾರ್ಮಿಕರ (ವಿಶೇಷ) ನೇಮಕಾತಿ ನಿಯಮಗಳು 2022ರಲ್ಲಿ ವಿಧಿಸಿರುವ ಷರತ್ತು ಮತ್ತು ನಿಬಂಧನಗಳನ್ವಯ ಪೌರಕಾರ್ಮಿಕರ ನೇರ ಪಾವತಿ ನೇಮಕಾತಿಯನ್ನು ಮಾಡಲಾಗುವುದು.

1. ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಆಯಾ ನಗರ ಸ್ಥಳೀಯ ಸಂಸ್ಥೆ ವ್ಯಾಪ್ತಿಯನ್ನೆ ಹೊಂದಿರತಕ್ಕದ್ದು ಬೇರೆ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕರ್ತವ್ಯ ನಿರತ ಅಭ್ಯರ್ಥಿಗಳ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

2. ಅರ್ಜಿಸಲ್ಲಿಸುವ ಅಭ್ಯರ್ಥಿಗಳು ಶಹಬಾದ ನಗರಸಭೆಯಲ್ಲಿ ಪೌರಕಾರ್ಮಿಕರಾಗಿ ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಪೌರಕಾರ್ಮಿಕರಾಗಿ, ಲೋಡರ್ಸ್/ ಯುಜಿಡಿ ಹೆಲ್ಪರ್ಸ್, ತ್ಯಾಜ್ಯ ಸಂಸ್ಕರಣ ಘಟಕ, ಸಾರ್ವಜನಿಕ ಶೌಚಾಲಯ, ಶೂನ್ಯ ತ್ಯಾಜ್ಯ ನಿರ್ವಹಣೆ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ/ಕಾರ್ಯನಿರ್ವಹಿಸಿದ ಅಭ್ಯರ್ಥಿಗಳಾಗಿರಬೇಕು. ಕನಿಷ್ಠ 01 ವರ್ಷಗಳ ನಿರಂತರ ಸೇವೆಯನ್ನು ಸಲ್ಲಿಸಿರಬೇಕು.

3. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳ ವಯೋಮಿತಿ ಕನಿಷ್ಠ–18, ಗರಿಷ್ಠ ವಯೋಮಿತಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ 50 ವರ್ಷಗಳು ಮೀರಕೂಡದು.

4. ಅಭ್ಯರ್ಥಿಯ ವಯಸ್ಸನ್ನು ಶೈಕ್ಷಣಿಕ / ವಿದ್ಯಾರ್ಹತೆ ದಾಖಲಾತಿಗಳು / ಆಧಾರ್ ಕಾರ್ಡ /ಜನನ ಪ್ರಮಾಣ ಪತ್ರ/ಪಡಿತರ ಚೀಟಿ / ಮತದಾರರ ಗುರುತಿನ ಚೀಟಿ (EPIC CARD) ದಾಖಲಾತಿಗಳನ್ನು ಆಧರಿಸಿ ನಿರ್ಧರಿಸಲಾಗುವುದು.

5. ನೇಮಕಾತಿಯಲ್ಲಿನ ಆದ್ಯತೆಯನ್ನು ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಈ ಹಿಂದೆ ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಪೌರಕಾರ್ಮಿಕರಾಗಿ ಕಾರ್ಯನಿರ್ವಹಿಸುತ್ತಿರುವ/ಕಾರ್ಯನಿರ್ವಹಿಸಿದ ಅಭ್ಯರ್ಥಿಗಳಿಗೆ ಪ್ರಥಮ ಆದ್ಯತೆ ನೀಡುವುದು. (ಕಾರ್ಯ ನಿರ್ವಹಿಸಿದ ಅವಧಿಗೆ ESI/ PF/ ವೇತನ ಪಾವತಿಸಿರು ಬ್ಯಾಂಕ್ ಪಾಸ್ ಬುಕ್ ಅಥವಾ ಹಾಜರಾತಿ ದಾಖಲೆಗಳನ್ನು ಪಡೆಯುವುದು).

6. ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಪೌರಕಾರ್ಮಿಕರಾಗಿ ಕಾರ್ಯನಿರ್ವಹಿಸುವಾಗ ಕೋವಿಡ್–19 ರ ಸಾಂಕ್ರಾಮಿಕ ರೋಗಕ್ಕೆ ತುತ್ತಾಗಿ ಅಥವಾ ಇತರೆ ಕಾರಣಗಳಿಂದ ಮರಣ ಹೊಂದಿದ ಪೌರಕಾರ್ಮಿಕರ ಕುಟುಂಬ ಸದಸ್ಯರಿಗೆ ಆದ್ಯತೆ ನೀಡುವುದು.

7. ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಲೋಡರ್ಸ್/ ಯುಜಿಡಿ ಹೆಲ್ಪರ್ಸ್ ಆಗಿ ಮತ್ತು ತ್ಯಾಜ್ಯ ಸಂಸ್ಕರಣ ಘಟಕ, ಸಾರ್ವಜನಿಕ ಶೌಚಾಲಯ, ಶೂನ್ಯ ತ್ಯಾಜ್ಯ ನಿರ್ವಹಣೆ ಘಟಕದಲ್ಲಿ ಕಾರ್ಯನಿರ್ವಹಿಸಿ ಅನುಭವವುಳ್ಳ ಸ್ಥಳೀಯ ಸ್ವಚ್ಛತಾ ಕೆಲಸಗಾರರನ್ನು ಪರಿಗಣಿಸಬಹುದು. (ಕಾರ್ಯನಿರ್ವಹಿಸಿದ ಅವಧಿಗೆ ESI/ PF/ ವೇತನ ಪಾವತಿಸಿರುವ ಬ್ಯಾಂಕ್ ಪಾಸ್ ಬುಕ್ ಅಥವಾ ಹಾಜರಾತಿ ದಾಖಲೆಗಳನ್ನು ಪಡೆಯುವುದು).

8. ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಅಧಿನಿಯಮದಡಿ ಗುರುತಿಸಲ್ಪಟ್ಟ ಸಂತ್ರಸ್ಥರುಗಳಿಗೆ ಅಥವಾ ಅವರ ಕುಟುಂಬದ ಸದಸ್ಯರಿಗೆ (ಗಂಡ, ಹೆಂಡತಿ, ಮಗ/ ಮಗಳು) ಒಟ್ಟು ಖಾಲಿ ಇರುವ ಹುದ್ದೆಗಳ ಪೈಕಿ ಶೇ.10 ರಷ್ಟು ಹುದ್ದೆಗಳನ್ನು ಮೀಸಲಿಡುವುದು.

9. ಮೇಲ್ಕಾಣಿಸಿದ ಕ್ರಮ ಸಂಖ್ಯೆ 05 ರಿಂದ 08 ರಲ್ಲಿ ತಿಳಿಸಿರುವ ವರ್ಗದವರಿಗೆ ಆದ್ಯತೆ ನೀಡಿದ ನಂತರ ಬಾಕಿ ಉಳಿಯುವ ಖಾಲಿ ಹುದ್ದೆಗಳನ್ನು ಇತರೆ ವರ್ಗಗಳಿಂದ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

Scanned with OKEN Scanner

10. ಕ್ರಮ ಸಂಖ್ಯೆ 05 ರಿಂದ 08 ರಲ್ಲಿ ತಿಳಿಸಿರುವಂತಹ ಅಭ್ಯರ್ಥಿಗಳು ಸಂಬಂಧಿಸಿದ ಸಕ್ಷಮ ಪ್ರಾಧಿಕಾರದಿಂದ ದೃಢಿಕರಣ ಪಡೆದಿರಬೇಕು. ಕಡಿಮೆ ವರ್ಷ ಸೇವೆ ಸಲ್ಲಿಸಿರುವವರಿಗಿಂತ ಹೆಚ್ಚು ವರ್ಷ ಸೇವೆ ಸಲ್ಲಿಸಿದವರಿಗೆ ಆದ್ಯತೆ ನೀಡಲಾಗುವುದು.

11. ನೇರಪಾವತಿಯಡಿ ಆಯ್ಕೆಗೊಂಡ ಪೌರಕಾರ್ಮಿಕರು ತಾತ್ಕಾಲಿಕವಾಗಿ ನೇಮಕವಾಗಿದ್ದು ಖಾಯಂ ನೌಕರರಿಗೆ ನೀಡುವಂತಹ ಇತರೇ ಯಾವುದೇ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ ಮತ್ತು ವ್ಯಕ್ತಿಗತವಾಗಿ ಅಥವಾ ಸಂಘಗಳನ್ನು ಸ್ಥಾಪಿಸಿಕೊಂಡು ಖಾಯಂ ಮಾಡುವಂತೆ ಒತ್ತಾಯಿಸುವಂತಿಲ್ಲ ಹಾಗೂ ಖಾಯಂ ಮಾಡುವಂತೆ ಯಾವುದೇ ನ್ಯಾಯಾಲಯದ ಮೊರೆ ಹೋಗುವುದಕ್ಕೆ ಆಸ್ಪದವಿರುವುದಿಲ್ಲ. **(ಈ ಕುರಿತು ಆಯ್ಕೆಗೊಂಡ ಅಭ್ಯರ್ಥಿಗಳಿಂದ Notary Affidavit ಕಡ್ಡಾಯವಾಗಿ ಪಡೆಯತಕ್ಕದ್ದು).**

12. ನೇರಪಾವತಿಗೆ ಆಯ್ಕೆಯಾಗುವವರು ಆರೋಗ್ಯವಂತರಾಗಿರಬೇಕು ಯಾವುದೇ ಕಾಯಿಲೆಗಳಿಂದ ಬಳಲುತ್ತಿರುವವರಾಗಿರಬಾರದು. ಈ ಕುರಿತು ವೈದ್ಯಾಧಿಕಾರಿಗಳಿಂದ ವೈದ್ಯಕೀಯ ದೃಢೀಕರಣ ಪತ್ರ ಪಡೆಯತಕ್ಕದ್ದು.

13. ನೇರ ಪಾವತಿಯಡಿ ಆಯ್ಕೆ ಹೊಂದಿರುವವರು ಕರ್ತವ್ಯ ನಿರ್ವಹಿಸುವ ಸಂಧರ್ಭದಲ್ಲಿ ಮೃತರಾದಲ್ಲಿ, ಅನುಕಂಪ ನೇಮಕಾತಿ, ಪಿಂಚಣಿ, ಉಪದಾನ, ಇತ್ಯಾದಿ ಯಾವುದೇ ಸೇವಾ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ.

14. ನೇರಪಾವತಿಯಡಿ ಆಯ್ಕೆ ಹೊಂದಿರುವ ಪೌರಕಾರ್ಮಿಕರು, ಸ್ವಚ್ಚತಾ ಕೆಲಸವನ್ನೇ ನಿರ್ವಹಿಸಬೇಕು. ಅದಲ್ಲದೇ ಇತರೆ ಯಾವುದೇ ಕೆಲಸಕ್ಕೆ ಅಥವಾ ಕಚೇರಿ ಕೆಲಸಗಳಿಗೆ ನಿರ್ವಹಿಸುವಂತಿಲ್ಲ/ ನಿಯೋಜಿಸುವಂತಿಲ್ಲ.

15. ನೇರಪಾವತಿಯಡಿ ಆಯ್ಕೆಗೊಂಡವರುಗಳ ಹೊರತು, ಸದರಿಯವರ ಹೆಸರಿನಲ್ಲಿ ಯಾವುದೇ ಸಂದರ್ಭದಲ್ಲಿಯೂ ಬೇರೊಬ್ಬರು ಕರ್ತವ್ಯ ನಿರ್ವಹಿಸುವಂತಿಲ್ಲ.

16. ನೇರಪಾವತಿಯಡಿ ಆಯ್ಕೆಗೊಂಡವರು ಕರ್ತವ್ಯ ನಿರ್ವಹಣೆಯಲ್ಲಿ ವಿಫಲರಾದಲ್ಲಿ ಅಥವಾ ಕಛೇರಿ ಮುಖ್ಯಸ್ಥರು ನೀಡುವ ಸೂಚನೆ ಮತ್ತು ಸಲಹೆಗಳನ್ನು ಪಾಲಿಸದೇ ಇದ್ದಲ್ಲಿ, ಸಂಬಂಧಿಸಿದ ಪೌರಾಯುಕ್ತರು ಯಾವುದೇ ಮೂನ್ಸೂಚನೆ ನೀಡದೇ ಸದರಿಯವರುಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲು ಕ್ರಮಕೈಗೊಳ್ಳುವುದು.

17. ನೇರಪಾವತಿಯಡಿ ಆಯ್ಕೆಗೊಂಡಿರುವ ನೌಕರರು ಸರ್ಕಾರದಿಂದ, ನಿರ್ದೇಶನಾಲಯದಿಂದ ಕಾಲಕಾಲಕ್ಕೆ ಹೊರಡಿಸುವ ಆದೇಶ/ ಸುತ್ತೋಲೆಗಳಿಗೆ ಬದ್ಧರಾಗಿರತಕ್ಕದ್ದು. **(ಈ ಕುರಿತು ಆಯ್ಕೆಗೊಂಡ ಅಭ್ಯರ್ಥಿಗಳಿಂದ Notary Affidavit ಕಡ್ಡಾಯವಾಗಿ ಪಡೆಯತಕ್ಕದ್ದು).**

18. ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಪೌರಕಾರ್ಮಿಕರಾಗಿ ಹಾಗು ಹೊರಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಲೋಡರ್ಸ್/ ಯುಜಿಡಿ ಹೆಲ್ಪರ್ಸ್ ಆಗಿ ಮತ್ತು ತ್ಯಾಜ್ಯ ಸಂಸ್ಕರಣ ಘಟಕ, ಸಾರ್ವಜನಿಕ ಶೌಚಾಲಯ, ಶೂನ್ಯ ತ್ಯಾಜ್ಯ ನಿರ್ವಹಣೆ ಘಟಕದಲ್ಲಿ ಕಾರ್ಯನಿರ್ವಹಿಸಿದ ಅಭ್ಯರ್ಥಿಗಳು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪಾವತಿಸಲಾದ ಕಾರ್ಮಿಕರ ರಾಜ್ಯ ವಿಮೆ (ಇ.ಎಸ್.ಐ) ಮತ್ತು ಭವಿಷ್ಯ ನಿಧಿ (ಪಿ.ಎಫ್), ಹಾಜರಾತಿ ಮತ್ತು ವೇತನ ಪಡೆದ 01 ವರ್ಷಗಳ ದಾಖಲಾತಿಗಳು ಕಡ್ಡಾಯವಾಗಿದ್ದು, ಅರ್ಜಿಯೊಂದಿಗೆ ಆಯಾ ಪೌರಾಯುಕ್ತರು/ಮುಖ್ಯಾಧಿಕಾರಿಯಿಂದ ಸದರಿ ದಾಖಲೆಗಳನ್ನು ದೃಢೀಕರಿಸಿ ಕಡ್ಡಾಯವಾಗಿ ಲಗತ್ತಿಸುವುದು.

19. ಎರಡು ಮತ್ತು ಅದಕ್ಕಿಂತ ಹೆಚ್ಚಿನ ಅಭ್ಯರ್ಥಿಗಳ ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ, ಅವರ ವಯಸ್ಸಿಗೆ ಅನುಗುಣವಾಗಿ ಅಂದರೆ ಹೆಚ್ಚು ವಯಸ್ಕರನ್ನು ಕಡಿಮೆ ವಯಸ್ಕರಿಗಿಂತ ಮೇಲೆ ಪರಿಗಣಿಸಲಾಗುವುದು.

20. ಸುತ್ತೋಲೆ ಉಲ್ಲೇಖ (01) ಮತ್ತು (02) ರಂತೆ ಆಯ್ಕೆಯಾಗಿರುವ ಅಭ್ಯರ್ಥಿಗಳು ನಿಗದಿತ ಅವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ ಸದರಿ ಅಭ್ಯರ್ಥಿಗೆ ಬದಲಾಗಿ ಹೆಚ್ಚುವರಿ ಪಟ್ಟಿಯಲ್ಲಿ ಅಭ್ಯರ್ಥಿಯಾಗಿರುವ ಮತ್ತೊಬ್ಬ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು.

21. ಸುತ್ತೋಲೆ ಉಲ್ಲೇಖ (01) ಮತ್ತು (02) ರಂತೆ ತಯಾರಿಸಲಾದ ಆಯ್ಕೆ ಪಟ್ಟಿಯನ್ನು ನಗರಸಭೆಗಳಲ್ಲಿ ಜಿಲ್ಲಾಧಿಕಾರಿಗಳ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ತಿಳಿಸಿ ಮತ್ತು ಆಯ್ಕೆ ಪಟ್ಟಿಯನ್ನು ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಯ ವೆಬ್‌ಸೈಟಿನಲ್ಲಿ ಪ್ರಚುರಪಡಿಸಲಾಗುವುದು.

Scanned with OKEN Scanner

22. ಅಭ್ಯರ್ಥಿಗಳ ನೇಮಕಾತಿಯನ್ನು ಆಯ್ಕೆ ಪಟ್ಟಿಯಲ್ಲಿ ನಮೂದಿಸಲಾದ ಅಭ್ಯರ್ಥಿಗಳ ಹೆಸರು, ಅವರ ಹೆಸರಿನ ಮುಂದೆ ತೋರಿಸಲಾದ ಖಾಲಿ ಹುದ್ದೆಗಳಿಗನುಸಾರ ಎಲ್ಲಾ ರೀತಿಯಿಂದ ನೇಮಕಾತಿಗೆ ಅರ್ಹರಾಗಿದ್ದಾರೆ ಎಂಬುದನ್ನು ವಿಚಾರಣೆಯ ಮೂಲಕ ಖಚಿತಪಡಿಸಿಕೊಂಡು ಕ್ರಮ ಜರುಗಿಸಲಾಗುವುದು.

23. ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದ ಮಾತ್ರಕ್ಕೆ ಅವರ ನೇಮಕಾತಿ ಹಕ್ಕು ಎಂದು ಪರಿಭಾವಿಸತಕ್ಕದ್ದಲ್ಲ.

24. ಆಯ್ಕೆಯಾಗುವ ಅಭ್ಯರ್ಥಿಗಳು ದಾಖಲಾತಿ ಪರಿಶೀಲನೆಗೆ ಕರೆದಾಗ ಜಿಲ್ಲಾಧಿಕಾರಿಗಳ ಕಛೇರಿ ಕಲಬುರಗಿ ಇಲ್ಲಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

25. ಪೌರಕಾರ್ಮಿಕರ ನೇರಪಾವತಿ ನೇಮಕಾತಿ ಸರ್ಕಾರದ, ಮೇಲಾಧಿಕಾರಿಗಳ ಕಾಲ ಕಾಲಕ್ಕೆ ನೀಡುವ ಸೂಚನೆಗಳನ್ವಯ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳುವ ಷರತ್ತಿಗೆ ಒಳಪಟ್ಟಿರುತ್ತದೆ.

➢ ಅರ್ಜಿ ಸಲ್ಲಿಸುವ ವಿಧಾನ :

ಅಧಿಸೂಚನೆಯ ಪ್ರತಿಯನ್ನು ಹಾಗೂ ನಿಗಧಿತ ಅರ್ಜಿ ನಮೂನೆಯನ್ನು ಈ ಕಾರ್ಯಾಲಯದಿಂದ ಹಾಗೂ ಸಂಬಂಧಿಸಿದ ನಗರಸಭೆಗಳಿಂದ ಪಡೆದು, ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು. ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸಿ, ಅದರ ಮೇಲೆ ಪೌರಾಯುಕ್ತರ ಸಹಿ/ರುಜು ಮಾಡುವುದು (ಅಭ್ಯರ್ಥಿ ಭಾವಚಿತ್ರದ ಮೇಲೆ ಅರ್ಧಭಾಗ ಹಾಗೂ ಮುಟಭಾಗದಲ್ಲಿ ಅರ್ಧಭಾಗ ಬರುವಂತೆ) ಹಾಗೂ ಅರ್ಜಿಯ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಅಭ್ಯರ್ಥಿ ಸಹಿ/ಹೆಬ್ಬೆಟ್ಟಿನ ಗುರುತು ಮಾಡುವುದು. ವಯಸ್ಸು ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರಿಗಳಿಂದ ಪಡೆದು, ಅವುಗಳ ನಕಲು ಪ್ರತಿಗಳನ್ನು ಆಯಾ ಪೌರಾಯುಕ್ತರಿಂದ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅರ್ಜಿಯನ್ನು ನೇರಪಾವತಿ ನೇಮಕಾತಿ ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು ಕಲಬುರಗಿ ಜಿಲ್ಲೆ ಇವರ ಪರವಾಗಿ ಪೌರಾಯುಕ್ತರು ನಗರಸಭೆ ಶಹಬಾದ ಇವರಿಗೆ ದಿನಾಂಕ________ ಸಂಜೆ_____ ಗಂಟೆಯೊಳಗೆ ತಲುಪುವಂತೆ ಕಳುಹಿಸುವುದು. ಅರ್ಜಿಯನ್ನು ಕಳುಹಿಸುವ ಲಕೋಟೆಯ ಮೇಲೆ ಅಭ್ಯರ್ಥಿಯು ತಾವು ಅರ್ಜಿ ಸಲ್ಲಿಸುವ ಹುದ್ದೆಯ ಹೆಸರನ್ನು ತಪ್ಪದೇ ನಮೂದಿಸುವುದು. ಸಮಯ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

➢ **ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:**

1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ. (ಒಟ್ಟು 3)
2. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ವರ್ಗಾವಣೆ ಪ್ರಮಾಣ ಪತ್ರ / ಜನನ ಪ್ರಮಾಣ ಪತ್ರ/ಆಧಾರದ ಕಾರ್ಡ್/ ಮತದಾರರ ಗುರುತಿನ ಚೀಟಿ (EPIC)/ ಗುರುತಿನ ಚೀಟಿ
3. ನಗರಸಭೆಯಲ್ಲಿ ಪೌರಕಾರ್ಮಿಕರಾಗಿ ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಪೌರಕಾರ್ಮಿಕರಾಗಿ, ಲೋಡರ್ಸ್/ ಯುಜಿಡಿ ಹೆಲ್ಪರ್ಸ್, ತ್ಯಾಜ್ಯ ಸಂಸ್ಕರಣ ಘಟಕ, ಸಾರ್ವಜನಿಕ ಶೌಚಾಲಯ, ಶೂನ್ಯ ತ್ಯಾಜ್ಯ ನಿರ್ವಹಣೆ ಘಟಕದಲ್ಲಿ ' 01 ವರ್ಷಕ್ಕಿಂತ ಕಡಿಮೆ ಇಲ್ಲದೆ ನಿರಂತರವಾಗಿ ಕಾರ್ಯನಿರ್ವಹಿಸುತ್ತಿರುವ/ಕಾರ್ಯನಿರ್ವಹಿಸಿದ ದೃಢೀಕತ (ಪೌರಾಯುಕ್ತರಿಂದ) ದಾಖಲೆ.
4. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪಾವತಿಸಲಾದ ಕಾರ್ಮಿಕರ ರಾಜ್ಯ ವಿಮೆ (ಇ.ಎಸ್.ಐ) ಮತ್ತು ಭವಿಷ್ಯ ನಿಧಿ (ಪಿ.ಎಫ್), ಹಾಜರಾತಿ ಮತ್ತು ವೇತನ ಪಡೆದ 01 ವರ್ಷಗಳ ದೃಢೀಕತ (ಪೌರಾಯುಕ್ತರಿಂದ) ದಾಖಲಾತಿಗಳನ್ನು ಲಗತ್ತಿಸುವುದು. ಹಾಗೂ ಸೇವಾ ಪ್ರಮಾಣ ಪತ್ರ ದಾಖಲೆ.
5. **ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಪೌರಕಾರ್ಮಿಕರಾಗಿ ಕರ್ತವ್ಯ ನಿರ್ವಹಿಸುವಾಗ ಕೋವಿಡ-19 ಸಂಕ್ರಾಮಿಕ ರೋಗದಿಂದ ಅಥವಾ ಇತರೆ ಕಾರಣಗಳಿಂದ ಮರಣಹೊಂದಿರುವ ಅಭ್ಯರ್ಥಿಯ ಕುಟುಂಬಸ್ಥರು ಅರ್ಜಿಯೊಂದಿಗೆ ಸಕ್ಷಮ ಪ್ರಾಧಿಕಾರದಿಂದ** ದೃಢೀಕರಣವನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕಿಂತ ಮುಂಚಿತವಾಗಿಯೆ ಪಡೆದು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.
6. ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಅಧಿನಿಯಮದಡಿ ಗುರುತಿಸಲ್ಪಟ್ಟ ಸಂತ್ರಸ್ಥರುಗಳಿಗೆ ಅಥವಾ ಅವರ ಕುಟುಂಬದ ಸದಸ್ಯರು (ಗಂಡ, ಹೆಂಡತಿ, ಮಗ/ ಮಗಳು) **ಅರ್ಜಿಯೊಂದಿಗೆ ಸಕ್ಷಮ ಪ್ರಾಧಿಕಾರದಿಂದ** ದೃಢೀಕರಣವನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕಿಂತ ಮುಂಚಿತವಾಗಿಯೆ ಪಡೆದು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

Scanned with OKEN Scanner

**ವಿಶೇಷ ಸೂಚನೆಗಳು :-**

- ಅಭ್ಯರ್ಥಿಗಳು ಈ ನೇಮಕಾತಿ ಪ್ರಾಧಿಕಾರ (ಜಿಲ್ಲಾಧಿಕಾರಿಗಳು ಕಲಬುರಗಿ) ನಿಗಧಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಅರ್ಜಿಗಳನ್ನು ಭರ್ತಿ ಮಾಡಿ ಸಲ್ಲಿಸತಕ್ಕದ್ದು, ಇಲ್ಲವಾದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
- ಅರ್ಜಿಯನ್ನು ಈ ಕಚೇರಿಯಿಂದ ಮಾರಾಟ ಮಾಡಲಾಗುವುದಿಲ್ಲ. ಅರ್ಜಿ ನಮೂನೆಯನ್ನು ಪೌರಾಯುಕ್ತರು ನಗರಸಭೆ ಶಹಬಾದ ರವರಿಂದ ಪಡೆದುಕೊಂಡು ಸಲ್ಲಿಸುವುದು.
- ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣ ಪತ್ರಗಳನ್ನು ಮತ್ತು ದಾಖಲೆಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದು ಲಗತ್ತಿಸಿರಬೇಕು ಮತ್ತು ಕಡ್ಡಾಯವಾಗಿ ಪೌರಾಯುಕ್ತರು ನಗರಸಭೆ ಶಹಬಾದ ಇವರಿಂದ ದೃಢೀಕರಿಸಿರಬೇಕು.
- ಅರ್ಜಿ ನಮೂನೆಯಲ್ಲಿ ಅಭ್ಯರ್ಥಿಯ ಖಾಯಂ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು. ಒಂದು ವೇಳೆ ಅಭ್ಯರ್ಥಿಯ ವಿಳಾಸ ಬದಲಾವಣೆಯಾದಲ್ಲಿ ತಕ್ಷಣವೇ ಈ ಕಚೇರಿಗೆ ಮಾಹಿತಿ ತಿಳಿಸಬೇಕು. ತಪ್ಪಿದಲ್ಲಿ ಮುಂದಿನ ಪತ್ರ ವ್ಯವಹಾರಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರು.
- ಈ ಅಧಿಸೂಚನೆಯು ಚಾಲ್ತಿಯಲ್ಲಿರುವ ಮತ್ತು ಕಾಲ-ಕಾಲಕ್ಕೆ ಸರ್ಕಾರದಿಂದ ಹೊರಡಿಸಲ್ಪಡುವ ಆದೇಶಗಳಿಗೆ ಒಳಪಟ್ಟಿರುತ್ತದೆ.
- ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ದಿನಾಂಕವು ಸಾರ್ವಜನಿಕ ರಜೆಯಾಗಿದ್ದರೆ ಮುಂದಿನ ಕಚೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಎಂದು ತಿಳಿಯುವುದು.

ಈ ಮೇಲಿನ ಸೂಚನೆಗಳಿಗೆ ಅನುಸಾರವಾಗಿ ದಾಖಲೆಗಳನ್ನು ಒದಗಿಸಲು ತಪ್ಪಿದಲ್ಲಿ ಅಂತಹ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜ ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತಾವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡು ಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಅಧ್ಯಕ್ಷರು,
ಪೌರಕಾರ್ಮಿಕರ ನೇರಪಾವತಿ ನೇಮಕಾತಿ ಪ್ರಾಧಿಕಾರ,
ಹಾಗೂ ಜಿಲ್ಲಾಧಿಕಾರಿಗಳು, ಕಲಬುರಗಿ ಜಿಲ್ಲೆ.

ಸ್ಥಳ: ಕಲಬುರಗಿ

ದಿನಾಂಕ: ___________

ಪ್ರತಿಯನ್ನು:-

1. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ಬೆಂಗಳೂರು ರವರ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
2. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, 9ನೇ ಮಹಡಿ ವಿಶ್ವೇಶ್ವರಯ್ಯ ಗೋಪುರ, ಡಾ. ಬಿ.ಆರ್. ಅಂಬೇಡ್ಕರ ವೀಧಿ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಕಛೇರಿ ಕಡತಕ್ಕೆ.

Scanned with OKEN Scanner